ಸಂಪಾದಕ:ಎಸ್.ಕೆ.ಒಡೆಯರ್ ಸ್ವಾಭಿಮಾನಿಗಳಪತ್ರಿಕೆ www.pavitrapraja.com

# ಪವಿತ್ರ ಪ್ರಜಾ

PAVITRAPRAJA Daily RNI:KARKAN: 2007/22780 ದಿನಪತ್ರಿಕೆ

e-mail:pavitrapraja@gmail.com KA/SK/CTA-806/21-23 Davanagere 9141920642

ಸಂಪುಟ:18 ಸಂಚಿಕೆ: 199 ದಿನಾಂಕ:18-06-2024 ಮಂಗಳವಾರ ಪುಟ:4 ರೂ.2-00 ಉಪಸಂಪಾದಕರು: ಸುಪ್ರಿತ ಎಸ್. ಒಡೆಯರ್ ಎಂಬಿಎ Vol:18 Issue:199 Date:18-06-2024 Tuesday page:4 Rs:2-00 subEditor: Supritha Wadeyar

# ರೈಲು ದುರಂತ 15 ಸಾವು

## ಬಂಗಾಳದಲ್ಲಿ ಕಾಂಜನ್ ಜುಂಗ್ ಎಕ್ಸ್‌ಪ್ರೆಸ್ ರೈಲಿಗೆ ಗೂಡ್ಸ್ ರೈಲು ಡಿಕ್ಕಿ




**60 ಮಂದಿಗೆ ಗಾಯ**

**10 ಲಕ್ಷ ಪರಿಹಾರ**

ಪಶ್ಚಿಮ ಬಂಗಾಳದಲ್ಲಿ ಸಂಭವಿಸಿದ ಭೀಕರ ರೈಲು ದುರಂತದಲ್ಲಿ ಮೃತಪಟ್ಟ ಕುಟುಂಬಸ್ತರಿಗೆ ತಲಾ 10 ಲಕ್ಷ ಪರಿಹಾರವನ್ನು ಕೇಂದ್ರ ಸರ್ಕಾರ ಪ್ರಕಟಿಸಿದೆ. ರೈಲ್ವೆ ಸಚಿವ ಅಶ್ವಿನಿವೈಷ್ಣವ್ ಈ ಅವಘಡದ ಬಗ್ಗೆ ದಿಗ್ಭ್ರಮೆ ವ್ಯಕ್ತಪಡಿಸಿದ್ದಾರೆ. ಗಾಯಾಳುಗಳ ಚಿಕಿತ್ಸಾ ವೆಚ್ಚವನ್ನು ಭರಿಸುವುದಾಗಿಯೂ ಅವರು ಹೇಳಿದ್ದಾರೆ.

ಕೋಲ್ಕತ್ತಾ:–

ಚಲಿಸುತ್ತಿದ್ದ ಗೂಡ್ಸ್ ರೈಲು ಮುಂದೆ ಹೋಗುತ್ತಿದ್ದ ಎಕ್ಸ್‌ಪ್ರೆಸ್ ರೈಲಿಗೆ ಇಂದು ಬೆಳಿಗ್ಗೆ ಹಿಂಬದಿಯಿಂದ ಡಿಕ್ಕಿ ಹೊಡೆದು ಸಂಭವಿಸಿರುವ ಭೀಕರ ಅಪಘಾತದಲ್ಲಿ 15 ಮಂದಿ ಸಾವನ್ನಪ್ಪಿ, 60ಕ್ಕೂ ಮಂದಿ ಗಾಯಗೊಂಡಿರುವ ಹೃದಯ ವಿದ್ರಾವಕ ಘಟನೆ ಪಶ್ಚಿಮಬಂಗಾಳದ ನ್ಯೂ ಜಲ್ಪೈಗುರಿ ಬಳಿ ನಡೆದಿದೆ.

ಕಾಂಚನ್‌ಜುಂಗಾ ಎಕ್ಸ್‌ಪ್ರೆಸ್ ರೈಲು ಅಸ್ಸಾಂನ ಸಿಲ್ಚಾರ್‌ನಿಂದ ಕೋಲ್ಕತ್ತಾದ ಸೀಲ್ದಾಗೆ ಬೆಳಿಗ್ಗೆ 9.30ರ ವೇಳೆ ಚಲಿಸುತ್ತಿದ್ದಾಗ ನ್ಯೂ ಜಲ್ಪೈಗುರಿ ಸಮೀಪದ ರಂಗಪಾಣಿ ನಿಲ್ದಾಣದ ಬಳಿ ಸಿಗ್ನಲ್ ಜಂಪ್ ಮಾಡಿ ಗೂಡ್ಸ್ ರೈಲು ಹಿಂದಿನಿಂದ ಡಿಕ್ಕಿ ಹೊಡೆದಿದ್ದರಿಂದ ಈ ಅವಘಡ ಸಂಭವಿಸಿದೆ ಭೀಕರ ಅಪಘಾತದಲ್ಲಿ 15ಮಂದಿ ಪ್ರಯಾಣಿಕರು ಸಾವನ್ನಪ್ಪಿದ್ದು ಗಾಯಗೊಂಡಿರುವ 60 ಮಂದಿಯನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಅವರಲ್ಲಿ 20 ಕ್ಕೂ ಹೆಚ್ಚು ಮಂದಿಯ ಸ್ಥಿತಿ ಚಿಂತಾಜನಕವಾಗಿರುವುದರಿಂದ ಸಾವಿನ ಸಂಖ್ಯೆ ಹೆಚ್ಚಾಗುವ ಸಾಧ್ಯತೆಯಿದೆ.

ಗೂಡ್ಸ್ ರೈಲು ಕಾಂಚನ್‌ಜುಂಗಾ ಎಕ್ಸ್‌ಪ್ರೆಸ್‌ಗೆ ಬೆಳಿಗ್ಗೆ 9.30ರ ವೇಳೆ ಡಿಕ್ಕಿ ಹೊಡೆದು ಈ ಭೀಕರ ಅಪಘಾತ ಸಂಭವಿಸಿದ್ದು, ಸಮಾರೋಪಾದಿಯಲ್ಲಿ ಪರಿಹಾರ ಕಾರ್ಯಗಳು ನಡೆದಿವೆ ಎಂದು ಡಾರ್ಜಿಲಿಂಗ್ ಎಸ್‌ಪಿ ಅಭಿಷೇಕ್ ರಾಯ್ ಮಾಹಿತಿ ನೀಡಿದ್ದಾರೆ.

ಅಗರ್ತಲಾದಿಂದ ಸೀಲ್ದಾಹ್‌ಗೆ ಪ್ರಯಾಣಿಸುತ್ತಿದ್ದ 13174 ಸಂ–ಖ್ಯೆಯ ಕಾಂಚನ್‌ಜುಂಗಾ ಎಕ್ಸ್‌ಪ್ರೆಸ್ ರಂಗಪಾಣಿ ಮತ್ತು ಚಥರ್‌ಹತ್ ನಿಲ್ದಾಣದ ಮಧ್ಯೆ ಅಪಘಾತಕ್ಕೀಡಾಗಿ ಹಳಿತಪ್ಪಿದೆ.

ಡಿಕ್ಕಿ ಹಿಡೆದ ರಭಸಕ್ಕೆ ಕಾಂಚನ್‌ಜುಂಗಾ ಎಕ್ಸ್‌ಪ್ರೆಸ್‌ನ ಎರಡು ಬೋಗಿಗಳು ಹಳಿ ತಪ್ಪಿವೆ. ಕಾಂಚನ್‌ಜುಂಗಾ ಎಕ್ಸ್‌ಪ್ರೆಸ್ ಬಂಗಾಳವನ್ನು ಈಶಾನ್ಯ ನಗರಗಳಾದ ಸಿಲ್ಚಾರ್ ಮತ್ತು ಅಗರ್ತಲಾದೊಂದಿಗೆ ಸಂಪರ್ಕಿಸುತ್ತದೆ. ಈ ಮಾರ್ಗವು ಚಿಕನ್ಸ್ ನೆಕ್ ಕಾರಿಡಾರ್‌ನಲ್ಲಿದೆ. ಈ ಮಾರ್ಗದಲ್ಲಿನ ಅಪಘಾತವು ಹಲವು ರೈಲುಗಳ ಸಂಚಾರದ ಮೇಲೆ ಟಿಪರಿಣಾಮ ಬೀರಿದೆ. ರಾಷ್ಟ್ರೀಯ ವಿಪತ್ತು ದಳ(ಎನ್‌ಡಿಆರ್‌ಎಫ್) 15 ಆಂಬ್ಯುಲೆನ್ಸ್‌ಗಳು ಸ್ಥಳದಲ್ಲಿ ಕಾರ್ಯಾಚರಣೆ ಕೈಗೊಂಡು ಗಾಯಗೊಂಡವರನ್ನು ಆಸ್ಪತ್ರೆಗೆ ದಾಖಲಿಸಿ ಕೆಲವರಿಗೆ ಪ್ರಾಥಮಿಕ ಚಿಕಿತ್ಸೆ ನೀಡಲಾಗಿದೆ.

ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಡಾರ್ಜಿಲಿಂಗ್ ಜಿಲ್ಲೆಯ ಫನ್ಸಿಡೆವಾ ಪ್ರದೇಶದಲ್ಲಿ ಸಂಭವಿಸಿದ ದುರಂತ ರೈಲು ಅಪಘಾತದ ಬಗ್ಗೆ ತಿಳಿದು ಆಘಾತವಾಯಿತು. ಕಾಂಚನ್‌ಜುಂಗಾ ಎಕ್ಸ್‌ಪ್ರೆಸ್ ಗೂಡ್ಸ್ ರೈಲಿಗೆ ಡಿಕ್ಕಿ ಹೊಡೆದಿದೆ ಎಂದು ತಿಳಿದು ಬಂದಿದೆ.

ವೈದ್ಯಕೀಯ ನೆರವಿಗಾಗಿ ಡಿಎಂ, ಎಸ್ಪಿ, ವೈದ್ಯರು, ಆಂಬ್ಯುಲೆನ್ಸ್‌ಗಳು ಮತ್ತು ವಿಪತ್ತು ತಂಡಗಳು ಸ್ಥಳಕ್ಕೆ ಧಾವಿಸಿ ಪರಿಹಾರ ಕೈಗೊಂಡಿವೆ ಎಂದು ತಿಳಿಸಿದ್ದಾರೆ.

**ಸಹಾಯವಾಣಿ ಆರಂಭ:**

ರೈಲ್ವೆ ಇಲಾಖೆ ಸಹಾಯವಾಣಿ ಸಂಖ್ಯೆಗಳನ್ನು ಬಿಡುಗಡೆ ಮಾಡಿದೆ. 033–23508794 ಮತ್ತು 03323833326 (ಸೀಲ್ದಾ) ಹಾಗೂ 03612731621, 03612731622 ಮತ್ತು 03612731623 (ಗುವಾಹಟಿ) ಸಂಖ್ಯೆಯನ್ನು ಸಂಪರ್ಕಿಸಬಹುದು. ಅಪಘಾತದ ಸ್ಥಳದಲ್ಲಿ ರಕ್ಷಣಾ ಕಾರ್ಯಾಚರಣೆಗಳು ಸಮರೋಪಾದಿಯಲ್ಲಿ ಪ್ರಾರಂಭವಾಗಿವೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಎಕ್ಸ್ ನಲ್ಲಿ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

ಎನ್‌ಎಫ್‌ಆರ್ ವಲಯದಲ್ಲಿ ಅಪಘಾತ ಸಂಭವಿಸಿದೆ. ರಕ್ಷಣಾ ಕಾರ್ಯಾಚರಣೆ ಸಮರೋಪಾದಿಯಲ್ಲಿ ನ ’ ಡ ’ –3ನೇ ಪುಟಕ್ಕೆ

## ಜಾಗೃತಿ ವಹಿಸಿ ಕುಡಿಯುವ ನೀರು ಸರಬರಾಜು ಮಾಡಿ



ಚಿತ್ರದುರ್ಗ:–

ಚಿತ್ರದುರ್ಗ ತಾಲ್ಲೂಕಿನ ಎಲ್ಲಾ 38 ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿಗಳು ನೀರುಗಂಟಿಗಳಿಂದ ಪ್ರತಿ ಗ್ರಾಮದಲ್ಲಿ ಕುಡಿಯುವ ನೀರಿನ ಬಗ್ಗೆ ಜಾಗೃತಿ ವಹಿಸಿ ಸ್ವಚ್ಛತೆ ಮೂಲಕ ನೀರು ಸರಬರಾಜು ಮಾಡುವಂತೆ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಹೆಚ್.ಹನುಮಂತಪ್ಪ ಸೂಚನೆ ನೀಡಿದರು.ನಗರದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಚಿತ್ರದುರ್ಗ ತಾಲ್ಲೂಕು ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿ ಗ್ರೇಡ್–2, ಗ್ರೇಡ್–1, ದ್ವಿತೀಯ ದರ್ಜೆ ಲೆಕ್ಕ ಸಹಾಯಕರು, ಕರವಸೂಲಿಗಾರ ಮತ್ತು ನೀರುಗಂಟಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಈಗಾಗಲೇ ಮುಂಗಾರು ಪ್ರಾರಂಭವಾಗಿರುವುದರಿಂದ ಕುಡಿಯುವ ನೀರಿಗೆ ಸಂಬಂಧಪಟ್ಟಂತೆ ಟ್ಯಾಂಗಳನ್ನು ಸ್ವಚ್ಛತೆ ಮಾಡುವುದು ಮತ್ತು ಪೈಲೈಗಳ ದುರಸ್ಥಿ ಮಾಡುವುದು, ಚರಂಡಿಗಳನ್ನು ಕ್ಲೀನಿಂಗ್ ಮಾಡುವುದು ಸೇರಿದಂತೆ ಪ್ರತಿ ತಿಂಗಳಿಗೊಮ್ಮೆ ಕುಡಿಯುವ ನೀರಿಗೆ ಸಂಬಂಧಿಸಿದ ಎಲ್ಲಾ ಕಾರ್ಯಕ್ರಮಗಳನ್ನು ಕಟ್ಟುನಿಟ್ಟಾಗಿ ಕೈಗೊಳ್ಳಬೇಕು ಎಂದು ತಾಕೀತು ಮಾಡಿದರು. ಸಭೆಯಲ್ಲಿ ತಾಲ್ಲೂಕು ಪಂಚಾಯಿತಿ ಸಹಾಯಕ ನಿರ್ದೇಶಕರಾದ ಹೆಚ್.ಯರ್ರಿಸ್ವಾಮಿ, ರೂಪಾಕುಮಾರಿ, ಯೋಜನಾ ನಿರ್ದೇಶಕ ರಾಘವೇಂದ್ರ, ವ್ಯವಸ್ಥಾಪಕ ತಿಪ್ಪೇಸ್ವಾಮಿ ಸೇರಿದಂತೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿ ಗ್ರೇಡ್–2, ಗ್ರೇಡ್–1, ದ್ವಿತೀಯ ದರ್ಜೆ ಲೆಕ್ಕ ಸಹಾಯಕರು, ಕರವಸೂಲಿಗಾರ ಮತ್ತು ನೀರುಗಂಟಿಗಳು ಇದ್ದರು.


## ಯೋಗಾಸಕ್ತರಿಗಾಗಿ ಸೈಕಲ್ ಜಾಥಾ




ದಾವಣಗೆರೆ:–

ಜಿಲ್ಲಾ ಆಯುಷ್ ಇಲಾಖೆ, ಜಿಲ್ಲಾ ಯೋಗ ಒಕ್ಕೂಟ ಬೈಸಿಕಲ್ ಕ್ಲಬ್ (ರಿ.) ಸಹಯೋಗದಲ್ಲಿ 10 ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಅಂಗವಾಗಿ ಸಾರ್ವಜನಿಕರಿಗೆ ಹಾಗೂ ಯೋಗಾಸಕ್ತರಿಗಾಗಿ ಸೈಕಲ್ ಜಾಥಾ ಕಾರ್ಯಕ್ರಮವನ್ನು ದಾವಣಗೆರೆಯ ಜಯದೇವ ವೃತ್ತದಿಂದ ಚಾಲನೆ ನೀಡಲಾಯಿತು. ಈ ಕಾರ್ಯಕ್ರಮದ ಉದ್ಘಾಟನೆಯನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಉಮಾ ಪ್ರಶಾಂತ್ ನೆರವೇರಿಸಿದರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಆಯುಷ್ ಅಧಿಕಾರಿಗಳಾದ ಡಾ. ಯೋಗೇಂದ್ರ ಕುಮಾರ್ ಬಿ.ಯು. ಡಾ. ಟಿ.ಎಂ.ರಾಜೇಂದ್ರ ಪ್ರಸಾದ್ , ಕೆ.ಎಸ್.ಮಹೇಶ್ ಉಪಸ್ಥಿತರಿದ್ದರು.ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಯೋಗ ಒಕ್ಕೂಟದ ಅಧ್ಯಕ್ಷ ಲ. ವಾಸುದೇವ ರಾಯ್ಕರ್ ವಹಿಸಿದ್ದರು.ಈ ವೇಳೆ ಇಂಧನ ಉಳಿಸಿ ಆರೋಗ್ಯ ಗಳಿಸಿ ಎಂಬ ಘೋಷ ವಾಕ್ಯಗಳ ಸಂದೇಶಗಳನ್ನು ಸಾರುತ್ತ ದಾವಣಗೆರೆ ಮುಖ್ಯ ರಸ್ತೆಗಳಲ್ಲಿ ಸಂಚರಿಸಿ ಯೋಗ ಜಾಗೃತಿ ಮೂಡಿಸಲಾಯಿತು.

## ಪೆಟ್ರೋಲ್–ಡೀಸೆಲ್ ಬೆಲೆ ಏರಿಕೆಗೆ ಖಂಡನೆ: ರಾಜ್ಯಾದಾದ್ಯಂತ ಬಿಜೆಪಿ ಪ್ರತಿಭಟನೆ, ಸರ್ಕಾರದ ವಿರುದ್ಧ ಆಕ್ರೋಶ




ಬೆಂಗಳೂರು:–


ರಾಜ್ಯದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆ ಮಾಡಿರುವ ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಆಕ್ರೋಶ ವ್ಯಕ್ತಪಡಿಸಿದ್ದು, ರಾಜ್ಯದಾದ್ಯಂತ ಸೋಮವಾರ ಪ್ರತಿಭಟನೆ ನಡೆಸುತ್ತಿದೆ.

ಇಂದು ಬೆಂಗಳೂರು, ಮಂಗಳೂರು, ಮಂಡ್ಯ ಸೇರಿ ರಾಜ್ಯದ ಹಲವು ಕಡೆಗಳಲ್ಲಿ ಸರ್ಕಾರದ ವಿರುದ್ಧ ಬಿಜೆಪಿ ಕಾರ್ಯಕರ್ತರು ಬೀದಿಗಿಳಿದು ಪ್ರತಿಭಟನೆ ನಡೆಸುತ್ತಿದ್ದಾರೆ.

ಬೆಂಗಳೂರಿನ ಫ್ರೀಡಂಪಾರ್ಕ್ ನಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ, ವಿಧಾನಸಭೆ ವಿಪಕ್ಷ ನಾಯಕ ಆರ್. ಅಶೋಕ್ ನೇತೃತ್ವದಲ್ಲಿ ಪ್ರತಿಭಟನೆ ನಡೆ–ಯುತ್ತಿದ್ದು, ಶಾಸಕರಾದ ಭೈರತಿ ಬಸವರಾಜ್ ಎಂಎಲ್ ಸಿ ರವಿ ಕುಮಾರ್ ಸಿ.ಟಿ ರವಿ ಭಾಗಿಯಾಗಿದ್ದಾರೆ. ಪ್ರತಿಭಟನೆ ವೇಳೆ ನಾಯಕರು ಸರ್ಕಾರದ ವಿರುದ್ಧ ದಿಕ್ಕಾರ ಕೂಗಿಆಕ್ರೋಶ ವ್ಯಕ್ತಪಡಿಸಿದ್ದಾರೆ.

ಪ್ರತಿಭಟನೆ ವೇಳೆ ಮಾತನಾಡಿದ ವಿಜಯೇಂದ್ರ ಅವರು, ರಾಜ್. ಸರ್ಕಾರದ ಜನವಿರೋಧಿ ನಿಲುವಿನ –3ನೇ ಪುಟಕ್ಕೆ

## ವಾಲ್ಮೀಕಿ ಕಲ್ಯಾಣ ನಿಗಮ ಹಗರಣದಲ್ಲಿ ಡಿಕೆಶಿಗೂ ಟ್ಯಾಕ್ಸ್: ಶಾಸಕ ಮುನಿರಾಜು ಹೊಸ ಬಾಂಬ್!



ಬೆಂಗಳೂರು:–

ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡ ಕಲ್ಯಾಣ ನಿಗಮದ ಹಗರಣ ಆರೋಪ ಹಿನ್ನೆಲೆಯಲ್ಲಿ ಸಚಿವ ಬಿ.ನಾಗೇಂದ್ರ ಅವರು ರಾಜೀನಾಮೆ ನೀಡಿದ್ದರು. ಇದರ ಬೆನ್ನಲ್ಲೇ ಸರ್ಕಾರ ವಿರುದ್ಧ ಸರಣಿ ಆರೋಪಗಳು ಕೇಳಿ ಬರುತ್ತಿವೆ.

ಬೆಂಗಳೂರಿನಲ್ಲಿ ಭಾನುವಾರ ಮಾತನಾಡಿದ ದಾಸರಹಳ್ಳಿ ಬಿಜೆಪಿ ಶಾಸಕ ಎಸ್.ಮುನಿರಾಜು ಅವರು, ಅಗತ್ಯ ಮೂಲಸೌಕರ್ಯ ಕಾಮಗಾರಿಗಳಿಗೆ ಡಿಕೆ.ಶಿವಕುಮಾರ್ ಅವರಿಗೂ ಶೇ.8ರಷ್ಟು ತೆರಿಗೆ ಇದೆ ಎಂದು ಆರೋಪಿಸಿದರು.

ಶೇ.18ರಷ್ಟು ಜಿಎಸ್‌ಟಿ, ಶೇ.2ರಷ್ಟು ಸೆಸ್, ಶೇ.2ರಷ್ಟು ತೆರಿಗೆ ಮತ್ತು ಶೇ.8ರಷ್ಟು ಡಿಕೆಶಿ ತೆರಿಗೆ ವಿಧಿಸಲಾಗುತ್ತಿದೆ. 75 ಲಕ್ಷ ರೂಪಾಯಿ ಅನುದಾನದಲ್ಲಿ ಲಂಚಗಳಿಗೆ ಹಣ ಹೋದರೆ, ಅಭಿವೃದ್ಧಿಗೆ ಏನು ಉಳಿಯುತ್ತದೆ? ಎಂದು ಪ್ರಶ್ನಿಸಿದ್ದಾರೆ.

ಈ ಹಿಂದೆ ರಾಜರಾಜೇಶ್ವರಿನಗರ ಶಾಸಕ ಎನ್ ಮುನಿರತ್ನ ಅವರು, ತಮ್ಮ ಕ್ಷೇತ್ರದ ಸುಮಾರು 126 ಕೋಟಿ ರೂ.ಗಳ ಅನುದಾನ ಮತ್ತು ಅಭಿವೃದ್ಧಿ ಹಣವನ್ನು ಕಡಿತಗೊಳಿಸಿ ಇತರ ಕ್ಷೇತ್ರಗಳಿಗೆ –3ನೇ ಪುಟಕ್ಕೆ

## ಮಳೆಗಾಲದಲ್ಲಿ ಸೋರುವ ಜಗಳೂರು ತಾಲೂಕು ಆಸ್ಪತ್ರೆ ಮೇಲ್ಛಾವಣಿ ; ಬೇಕಾಗಿದೆ ತುರ್ತು ಚಿಕಿತ್ಸೆ



ಜಗಳೂರು:–

ಇಲ್ಲಿನ ತಾಲೂಕು ಆಸ್ಪತ್ರೆಗೆ ವಿಜಯನಗರ, ಚಿತ್ರದುರ್ಗ,ಕೊಟ್ಟೂರು, ಚಳ್ಳಕೆರೆ ಗಡಿ ಭಾಗದ ಜನರಿಗೂ ಅತ್ಯವಶ್ಯಕವಾದ ಆಸ್ಪತ್ರೆಯಾಗಿದೆ ಪ್ರತಿನಿತ್ಯ ಸಾವಿರಕ್ಕೂ ಹೆಚ್ಚು ರೋಗಿಗಳು ಧಾವಿಸಿ ಇಲ್ಲಿನ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಾರೆ.ಈ ಸಾರ್ವಜನಿಕ ಆಸ್ಪತ್ರೆಯು 100 ಹಾಸಿಗೆಗಳ ಕೂಡಿದೆ ಆದರೆ ಇಲ್ಲಿ ಹಲವು ವರ್ಷಗಳಿಂದ ವೈದ್ಯರ ಕೊರತೆ ಎದ್ದು ಕಾಣು ತ್ತಿದೆ ಪ್ರಸ್ತುತ ಈ ಆಸ್ಪತ್ರೆಯಲ್ಲಿ 14 ವೈದ್ಯರು ಇರಬೇಕಿತ್ತು ಆದರೆ ಎಂಟು ತಜ್ಞವೈದ್ಯರು ಕಾರ್ಯನಿರ್ವಹಿಸುತ್ತಿದ್ದಾರೆ ಅದರಲ್ಲಿ ಅರವಳಿಕೆ ತಜ್ಞರು.ಕಣ್ಣು ತಜ್ಞರು.ಕಿವಿ ಮೂಗು ಗಂಟಲು ತಜ್ಞರು .ಮಕ್ಕಳ ತಜ್ಞರು. ಮೂಳೆತಜ್ಞರು ದಂತ ವೈದ್ಯರು.ಜನ ರಲ್ ಸರ್ಜನ್.ಸ್ತ್ರೀರೋಗ ಪ್ರಸುತಿ ತಜ್ಞರು. ಕಾರ್ಯನಿರ್ವ ಹಿಸುತ್ತಿದ್ದಾರೆ ಇನ್ನುಳಿದಂತೆ ಎಲ್ಲದಕ್ಕೂ ಅತಿ ಮುಖ್ಯವಾಗಿ ಫಿಜಿ ಶಿಯನ್ (ಹೃದಯ ರೋಗ ತಜ್ಞರು).ಚರ್ಮರೋಗ. 4 ತುರ್ತು ವೈದ್ಯಾಧಿಕಾರಿಗಳು.ಸೇರಿದಂತೆ ರೇಡಿಯೋಲೋಜಿಸ್ಟ್.ವೈದ್ಯರ ಹುದ್ದೆಗಳು ಖಾಲಿ ಇವೆ ಎಂದು ಶಾಸಕ ಬಿ ದೇವೇಂದ್ರಪ್ಪ ಮತ್ತು ಡಿ.ಎಚ್.ಓ ಮತ್ತು ಸರ್ಕಾರಕ್ಕೆ ಈಗಾಗಲೇ ಈ ವಿಷಯದ ಬಗ್ಗೆ ವರದಿ ಸಲ್ಲಿಸಲಾಗಿದೆ ಎಂದು ಆಸ್ಪತ್ರೆಯ ವೈದ್ಯಾಧಿಕಾರಿ ಷಣ್ಮುಖಪ್ಪ ಸಂಜೆವಾಣಿ ದಿನ ಪತ್ರಿಕೆಗೆ ತಿಳಿಸಿದ್ದಾರೆ.

## ನಮ್ಮ ರಾಜ್ಯದಲ್ಲಿ ಇಂಧನ ಬೆಲೆ ಕಡಿಮೆ:ಸಿದ್ದರಾಮಯ್ಯ



ಬೆಂಗಳೂರು:–

ಪೆಟ್ರೋಲ್– ಡೀಸೆಲ್ ಮೇಲಿನ ತೆರಿಗೆ ಹೆಚ್ಚಳದ ಬಳಿಕವೂ ಬಿಜೆಪಿ ಆಡಳಿತದ ರಾಜ್ಯಗಳಿಗಿಂತ, ದಕ್ಷಿಣ ಭಾರತದ ರಾಜ್ಯಗಳಿಗಿಂತ ನಮ್ಮ ರಾಜ್ಯದಲ್ಲಿ ಇಂಧನ ಬೆಲೆ ಕಡಿಮೆ ಇದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಂಕಿ ಅಂಶಗಳ ಸಮೇತ ವಿವರಿಸಿದರು. ಗೃಹ ಕಚೇರಿ ಕೃಷ್ಣದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ತೆರಿಗೆ ಹೆಚ್ಚಳದ ಅನಿವಾರ್ಯತೆಯನ್ನು ಕೇಂದ್ರದ ಮೋದಿ ಸರ್ಕಾರ ಹೇಗೆ ಸೃಷ್ಟಿಸಿತು, ರಾಜ್ಯದ ಪಾಲಿನ ಹಣವನ್ನು ಕೊಡದೇ ಇರುವುದರಿಂದ ಸೃಷ್ಟಿ ಆಗಿರುವ ಪರಿಸ್ಥಿತಿಯನ್ನು ವಿವರಿಸಿದರು. –3ನೇ ಪುಟಕ್ಕೆ

